ಪತ್ರಿಕಾ ತುಣುಕುಗಳು
**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 10/4/2021

# ಕಾರಜೋಳ ಆಸ್ಪತ್ರೆಗೆ ದಾಖಲು

ಬೆಂಗಳೂರು: ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರು ಎರಡನೇ ಬಾರಿಗೆ ಕೊರೊನಾ ಸೋಂಕಿಗೆ ತುತ್ತಾಗಿದ್ದು, ನಗರದ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕಳೆದ ಕೆಲ ದಿನಗಳಿಂದ ಬೆಳಗಾವಿ ಲೋಕಸಭೆ ಹಾಗೂ ಮಸ್ಕಿ ಉಪ ಚುನಾವಣಾ ಪ್ರಚಾರ ಕಾರ್ಯದಲ್ಲಿ ತೊಡಗಿಸಿ ಕೊಂಡಿದ್ದ ಅವರು ಎರಡು ದಿನಗಳ ಹಿಂದೆ ಕೊರೊನಾದಿಂದ ಬಳಲುತ್ತಿದ್ದಾರೆ. ಸದ್ಯ ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿದ್ದು, ವೈದ್ಯರು ಕೆಲದಿನಗಳ ಕಾಲ ವಿಶ್ರಾಂತಿ ಪಡೆಯುವಂತೆ ಸೂಚಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಬೆಳಗಾವಿ ಲೋಕಸಭೆ ಮತ್ತು ಮಸ್ಕಿ ವಿಧಾನಸಭಾ ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರದಲ್ಲಿ ತೊಡಗಿಸಿ ಕೊಂಡಿರುವ ಸಂದರ್ಭದಲ್ಲಿ ನನಗೆ ವಿಪರೀತ ಮೈಕೈ ನೋವು ಆರಂಭವಾಗಿತ್ತು. ವೈದ್ಯರಲ್ಲಿ ಪರೀಕ್ಷೆ ಮಾಡಿಸಿ ಕೊಂಡಾಗ ನನಗೆ ಕೋರೋನಾ ಸೋಂಕು ತಗುಲಿರುವುದು ಗೊತ್ತಾಗಿತ್ತು. ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವುದರಿಂದ ಚುನಾವಣಾ ಪ್ರಚಾರಕ್ಕೆ ನಾನು ಬರಲು ಸಾಧ್ಯವಾಗುತ್ತಿಲ್ಲ. ವೈದ್ಯರು ವಿಶ್ರಾಂತಿ ಪಡೆಯಬೇಕೆಂದು ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರ, ಮಸ್ಕಿ ಮತ್ತು ಬಸವಕಲ್ಯಾಣ ವಿಧಾನಸಭಾ ಕ್ಷೇತ್ರಗಳ ಪ್ರಚಾರ ಕಾರ್ಯದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದ್ದಾರೆ. ಈ ಮಧ್ಯೆ ಆಸ್ಪತ್ರೆಗೆ ಭೇಟಿ ನೀಡಿದ ಆರೋಗ್ಯ ಸಚಿವ ಡಾ. ಕೆ. ಸುಧಾಕರ್ ವೈದ್ಯರೊಂದಿಗೆ ಚರ್ಚಿಸಿ ಕಾರಜೋಳ ಅವರ ಆರೋಗ್ಯ ವಿಚಾರಿಸಿದ್ದಾರೆ.